# <u>ಕರ್ನಾಟಕ ವಿಧಾನ ಪರಿಷತ್ತು</u>

ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ : 893

ಸದಸ್ಯರ ಹೆಸರು : ಶ್ರೀ ಸಿ.ಎನ್ ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 24.08.2026

ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಶೈಕ್ಷಣಿಕ ವರ್ಷ ಆರಂಭವಾಗಿ ಒಂದೂವರೆ ತಿಂಗಳು ಕಳೆದರೂ ೯ ಮತ್ತು ೧೦ನೇ ತರಗತಿ ವಿದ್ಯಾರ್ಥಿಗಳಿಗೆ ಬಿಸಿಯೂಟದ ಅಕ್ಕಿ ಸಿಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | 9 ಮತ್ತು 10ನೇ ತರಗತಿ ಬಿಸಿಯೂಟಕ್ಕೆ ಅಕ್ಕಿಯ ಕೊರತೆ ಉಂಟಾಗಿರುವುದಿಲ್ಲ. |
| ಆ) | ಎಫ್.ಸಿ.ಐ (FCI) ಯಿಂದ $ 59,594.145 ಕ್ವಿಂಟಾಲ್ ಅಕ್ಕಿ ಖರೀದಿಗೆ ಆರ್ಥಿಕ ಇಲಾಖೆ ಒಪ್ಪಿಗೆ ನೀಡಿದ್ದರೂ ಅಕ್ಕಿ ಪೂರೈಕೆಯಾಗದಿರಲು ಕಾರಣಗಳೇನು; | ಆರ್ಥಿಕ ಇಲಾಖೆಯ ಅನುಮೋದನೆ ಪಡೆದು ಜಿಲ್ಲಾವಾರು ಹಂಚಿಯಾದ ಅಕ್ಕಿಯನ್ನು ಭಾರತ ಆಹಾರ ನಿಗದಮದ ಗೋದಾಮುಗಳಿಂದ ಜಿಲ್ಲಾ ಹಾಗೂ ತಾಲ್ಲೂಕು ಹಂತದಲ್ಲಿ ಎತ್ತುವಳಿ ಮಾಡಿ ಶಾಲೆಗಳಿಗೆ ಸರಬರಾಜು ಮಾಡಲಾಗಿದೆ. |
| ಇ) | ಅಕ್ಕಿ ಅಭಾವದಿಂದಾಗಿ ೧ ರಿಂದ ೮ನೇ ತರಗತಿಯ ಮಕ್ಕಳ ದಾಸ್ತಾನಿನಿಂದಲೇ ಪ್ರೌಢಶಾಲಾ ಮಕ್ಕಳಿಗೂ ಬಿಸಿಯೂಟ ಪೂರೈಸುತ್ತಿರುವುದು ನಿಜವೇ; | ಪ್ರೌಢ ಶಾಲೆಗಳಲ್ಲಿ ಅಕ್ಕಿಯ ದಾಸ್ತಾನು ಲಭ್ಯವಿದ್ದು ಯಾವುದೇ ಕೊರತೆ ಉಂಟಾಗಿರುವುದಿಲ್ಲ. |
| ಈ) | ಅಧಿಕಾರಿಗಳ ವಿಳಂಬ ಧೋರಣೆಯಿಂದ ಸೃಷ್ಟಿಯಾಗಿರುವ ಈ ಸಮಸ್ಯೆಯನ್ನು ಬಗೆಹರಿಸಿ, ವಿದ್ಯಾರ್ಥಿಗಳಿಗೆ ತಕ್ಷಣ ಅಕ್ಕಿ ತಲುಪಿಸಲು ಸರ್ಕಾರ ಕೈಗೊಂಡಿರುವ ತುರ್ತು ಕ್ರಮಗಳೇನು? | ಆರ್ಥಿಕ ಇಲಾಖೆಯ ಅನುಮೋದನೆ ಪಡೆದು ಜಿಲ್ಲಾವಾರು ಹಂಚಿಯಾದ ಅಕ್ಕಿಯನ್ನು ಭಾರತ ಆಹಾರ ನಿಗದಮದ ಗೋದಾಮುಗಳಿಂದ ಜಿಲ್ಲಾ ಹಾಗೂ ತಾಲ್ಲೂಕು ಹಂತದಲ್ಲಿ ಎತ್ತುವಳಿ ಮಾಡಿ ಶಾಲೆಗಳಿಗೆ ಸರಬರಾಜು ಮಾಡಲಾಗಿದ್ದು, ಪ್ರಸ್ತುತ ಯಾವುದೇ ಸಮಸ್ಯೆ ಇರುವುದಿಲ್ಲ. |

ಸಂಖ್ಯೆ: ಇಪಿ 47 ಎಂಎಂಎಸ್ 2026

**(ಎಸ್. ಮಧು ಬಂಗಾರಪ್ಪ)**

**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**